**CC 1313/2018**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ**
**ನ್ಯಾಯಾಲಯ, ವಿಜಯನಗರ ಜಿಲ್ಲೆ, ಹೊಸಪೇಟೆ.**
**ಸಿಸಿ ನಂಬರ್** 1313/2018

**ಸಿ ಡಬ್ಲ್ಯೂ** -4
**ಪಿ ಡಬ್ಲ್ಯೂ** -3

**ಸಾಕ್ಷಿಯ ಹೆಸರು -** **ವಸೀಮಂ ಅಕ್ರಂ**
**ತಂದೆಯ ಹೆಸರು -** **ಖಲೀಲ್ ಸಾಬ್**
**ವಯಸ್ಸು -** 35 **ವರ್ಷಗಳು**
**ಉದ್ಯೋಗ -** **ಖಾಸಗಿ ಕೆಲಸ**
**ವಾಸಸ್ಥಳ -** **ಹೊಸಪೇಟೆ**

**ಸಾಕ್ಷಿಯನ್ನು ದಿನಾಂಕಃ** 12-12-2025 **ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಆರೋಪಿತರ ಮನೆಯ ಮುಂದನ ಸ್ಥಳದಲ್ಲಿ ಮಾಡಲಾದ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ **7** ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿಃ **7**(ಬಿ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು **2017** ರಲ್ಲಿ ಇಳಕಲ್ ನಲ್ಲಿ ಮಾಡಿರುತ್ತೇನೆ. ನಿಪಿಃ **7** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ. ಈಗ ನಾನು ನೋಡುತ್ತಿರುವ ಫೋಟೋದಲ್ಲಿನ ವ್ಯಕ್ತಿ ನಾನೇ. ಸಾಕ್ಷಿ ನಿಪಿಃ **8** ಅನ್ನು ನೋಡಿ ಗುರುತಿಸಿರುತ್ತಾರೆ. ನಿಪಿಃ **8** ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**CC 1313/2018**

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ದಿಃ 18-09-2017 ರಂದು ಪ್ರಕರಣದ ತನಿಕಾಧಿಕಾರಿ ಚಾಸಾ -1 ವರು ತೋರಿಸಿದ್ದ ಆರೋಪಿಯ ಮನೆಗೆ ನನ್ನನ್ನು ಮತ್ತು ಚಾಸಾ -5 ರವರನ್ನು ಕರೆದುಕೊಂಡು ಹೋಗಿದ್ದರು ಅಂದರೆ ಸರಿಯಲ್ಲ. ಸದರಿ ಮನೆಯ ಮುಂದೆ ನಮ್ಮ ಸಮಕ್ಷಮ ನಿಪಿಃ 7 ರಂತೆ ಪಂಚನಾಮೆ ಕ್ರಮಾ ಜರುಗಿಸಲಾಗಿತ್ತು ಅಂದರೆ ಸರಿಯಲ್ಲ. ನಿಪಿಃ 7 ಕ್ಕೆ ಸ್ಥಳದಲ್ಲಿಯೇ ಸಹಿ ಮಾಡಿದ್ದೆ ಅಂದರೆ ಸರಿಯಲ್ಲ. ನಿಪಿಃ 8 ಅನ್ನು ಆಗಲೇ ತೆಗೆಯಲಾಗಿತ್ತು ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಕ್ರಮ ಜರುಗಿಸಿದ್ದರೂ ಸಹ ಆರೋಪಿಗೆ ಸಹಾಯ ಮಾಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಎಸ್.ವಿ.ಬಿ ವಕೀಲರಿಂದಃ** ಇಲ್ಲಾ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.